ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/83/ಸುತ್ತೋಲೆ/2022-23/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು ದಿನಾಂಕ:03.08.2023

**ಸುತ್ತೋಲೆ**

ವಿಷಯ: ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ e-Rupi ವ್ಯವಸ್ಥೆಯನ್ನು ಅಳವಡಿಸಿರುವ ಸಂಬಂಧ ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಬ್ಯಾಂಕ್ ಖಾತೆ VPA (Virtual Payment Address) ID ಯನ್ನು ಸಲ್ಲಿಸುವ ಬಗ್ಗೆ.

ಉಲ್ಲೇಖ: 1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಕಇ/ಇಡಿ/03/ವಿ.ವೇತನ ಕೋಶ/ಸಿಆರ್/2022-23 ದಿನಾಂಕ:10.02.2023.
2. ಸಮಸಂಖ್ಯೆಯ ಪತ್ರದ ದಿನಾಂಕ:27.02.2023, ದಿ:11.07.2023

**********

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರಿ ಹಾಗೂ ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನವನ್ನು ಸಮಾಜ ಕಲ್ಯಾಣ ಇಲಾಖೆಯು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಮೂಲಕ ಮಂಜೂರು ಮಾಡುತ್ತಿದೆ.

ಅದರಂತೆ 2022-23ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮದಡಿ ಮಂಜೂರು ಮಾಡಲಾದ ವಿದ್ಯಾರ್ಥಿ ವೇತನದ ಮೊತ್ತವನ್ನು e-Rupi ಮುಖಾಂತರ ಪಾವತಿ ಮಾಡಲು VPA (Virtual Payment Address) ಅಗತ್ಯವಿದ್ದು, ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು ತಮ್ಮ ಸಂಸ್ಥೆಯ ವಿದ್ಯಾರ್ಥಿವೇತನ ಖಾತೆಗೆ ಸಂಬಂದಿಸಿದ ಬ್ಯಾಂಕಿನ ನಿಖರವಾದ ವಿಳಾಸವನ್ನು ಬ್ಯಾಂಕಿನಿಂದ VPA (Virtual Payment Address) ಪಡೆದು, Bank Branch Manager ಮತ್ತು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರ ಜಂಟಿ ಸಹಿಯೊಂದಿಗೆ VPA ID ಯನ್ನು ಸಮಾಜ ಕಲ್ಯಾಣ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸಲ್ಲಿಸುವಂತೆ ಸೂಚಿಸಲಾಗಿದ್ದರೂ ಕೆಲವು ಕಾಲೇಜುಗಳ ಪ್ರಾಂಶುಪಾಲರು VPA ID ಮಾಹಿತಿಯನ್ನು ಇಲ್ಲಿಯವರೆಗೂ ಸಲ್ಲಿಸಿರುವುದಿಲ್ಲ.

ಅದ್ದರಿಂದ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳು ತಮ್ಮ ವ್ಯಾಪ್ತಿಯ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಮ್ಮ ಕಾಲೇಜಿನ ವಿದ್ಯಾರ್ಥಿವೇತನ ಖಾತೆಯ VPA ID ಯನ್ನು ಕಡ್ಡಾಯವಾಗಿ ಬ್ಯಾಂಕಿನಿಂದ ಪಡೆಯಲು ಸೂಚಿಸಲು ಹಾಗೂ VPA ID ಮಾಹಿತಿಯನ್ನು ಪಡೆದು ತಮ್ಮ ಹಂತದಲ್ಲಿಯೇ ಕ್ರೋಢಿಕರಿಸಿ, ದಿನಾಂಕ:10.08.2023 ರೊಳಗೆ ಕೇಂದ್ರ ಕಛೇರಿಗೆ ತುರ್ತಾಗಿ ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು.

ಇವರಿಗೆ: 1.ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ತಮ್ಮ ವ್ಯಾಪ್ತಿಯ ಅನುದಾನಿತ ಕಾಲೇಜುಗಳಿಂದ ಮಾಹಿತಿ ಕ್ರೋಡಿಕರಿಸಿ ಸಲ್ಲಿಸುವುದಕ್ಕಾಗಿ,
2. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ ಬೆಂಗಳೂರು.
3. ಕಛೇರಿ ಪ್ರತಿ